ಪತ್ರಿಕಾ ತುಣುಕುಗಳು
PAPER CLIPPINGS
ಶಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ
ದಿನಾಂಕ : DATE : 18/3/21

# ಅಕ್ರಮ ಸಾಗುವಳಿ ಸಕ್ರಮಕ್ಕೆ ಮತ್ತೆ ಅರ್ಜಿ ಆಹ್ವಾನ?

• **ಕನ್ನಡಪ್ರಭ ವಾರ್ತೆ** ವಿಧಾನ ಪರಿಷತ್

ಸರ್ಕಾರಿ ಜಮೀನಿನಲ್ಲಿ ಅನಧಿಕೃತ ಸಾಗುವಳಿ ಮಾಡುತ್ತಿರುವ ಜಮೀನು ಸಕ್ರಮಕ್ಕೆ ಮತ್ತೆ ಅರ್ಜಿ ಆಹ್ವಾನಿಸಲು ಕಾಯ್ದೆಗೆ ತಿದ್ದುಪಡಿ ತರುವ ಸಂಬಂಧ ಮುಖ್ಯಮಂತ್ರಿ ಜೊತೆ ಚರ್ಚಿಸಿ ನಿರ್ಧರಿಸಲಾಗುವುದು ಎಂದು ಕಂದಾಯ ಸಚಿವ ಆರ್.ಅಶೋಕ್ ಹೇಳಿದ್ದಾರೆ.

ಕಾಂಗ್ರೆಸ್‌ನ ಕೆ. ಪ್ರತಾಪ್‌ಚಂದ್ರ ಶೆಟ್ಟಿ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಸರ್ಕಾರಿ ಜಮೀನಿನಲ್ಲಿ ಅನಧಿಕೃತ ಸಾಗುವಳಿ ಮಾಡುತ್ತಿರುವ ಸಣ್ಣ, ಅತಿ ಸಣ್ಣ ರೈತರಿಗೆ ಆ ಜಮೀನನ್ನು



ಸಕ್ರಮಗೊಳಿಸಲು ಕರ್ನಾಟಕ ಭೂ ಕಂದಾಯ ಕಾಯ್ದೆ 1964ಕ್ಕೆ ತಿದ್ದುಪಡಿಮಾಡಿ 2018ರ ಮಾ.17ರಿಂದ 2019ರ ಮಾ.16ರವರೆಗೆ ಅರ್ಜಿ ಆಹ್ವಾನಿಸಲಾಗಿತ್ತು. ಇದರಡಿ 8.02 ಲಕ್ಷ ಅರ್ಜಿಗಳು ಸ್ವೀಕೃತವಾಗಿವೆ. 2018ರ ಲೋಕಸಭಾ ಚುನಾವಣೆ ಘೋಷಣೆ ಬಳಿಕ ಈ ಅರ್ಜಿಗಳ ಸಂಬಂಧ ಪ್ರಕ್ರಿಯೆ ಮುಂದುವರೆದಿಲ್ಲ, ಸ್ವೀಕೃತ ಅರ್ಜಿಗಳನ್ನು ಅಪ್‌ಲೋಡ್ ಮಾಡಲು ಅಧಿಕಾರಿಗಳಿಗೆ ಸೂಚನೆ ನೀಡಲಾಗುವುದು. ಆದರೆ, ಹೊಸದಾಗಿ ಮತ್ತೆ ಅರ್ಜಿ ಆಹ್ವಾನಿಸಲು ಕಾಯ್ದೆಗೆ ಮತ್ತೆ ತಿದ್ದುಪಡಿ ತರಬೇಕಾಗುತ್ತದೆ. ಈ ಬಗ್ಗೆ ಮುಖ್ಯಮಂತ್ರಿಗಳ ಜತೆ ಚರ್ಚಿಸಿ ತಿದ್ದುಪಡಿಗೆ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಹೇಳಿದರು.

ಪ್ರತಾಪ್‌ಚಂದ್ರಶೆಟ್ಟಿ ಮಾತನಾಡಿ, ಉಡುಪಿ ಜಿಲ್ಲೆಯಲ್ಲಿ ರೈತರಿಗೆ ಅರ್ಜಿ ಸಲ್ಲಿಸಲು ಸಮಯಾವಕಾಶವಿದ್ದರೂ 2018ರ ಲೋಕಸಭಾ ಚುನಾವಣೆ ಕಾರಣ ಎಂಟು ದಿನ ಮೊದಲೇ ಅರ್ಜಿ ಸ್ವೀಕಾರ ನಿಲ್ಲಿಸಲಾಗಿದೆ. ಎಲ್ಲ ಜಿಲ್ಲೆಗಳಲ್ಲೂ ಈ ರೀತಿ ಆಗಿರುವುದರಿಂದ ರೈತರು ತೊಂದರೆಯಲ್ಲಿದ್ದಾರೆ. ಹಾಗಾಗಿ ಅಗತ್ಯಬಿದ್ದರೆ ಕಾಯ್ದೆಗೆ ತಿದ್ದುಪಡಿ ತಂದು ಮತ್ತೆ ಅರ್ಜಿ ಆಹ್ವಾನಿಸಲು ಒತ್ತಾಯಿಸಿದರು.

## ಭೂಕಬಳಿಕೆ: ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಕಾನೂನು

ವಿಧಾನಸಭೆ: ಬೆಂಗಳೂರು ಸೇರಿದಂತೆ ರಾಜ್ಯಾದ್ಯಂತ ಲಕ್ಷಾಂತರ ಎಕರೆ ಸರ್ಕಾರಿ ಭೂಮಿ ಕಬಳಿಕೆಯಾಗಿದೆ. ಪ್ರಸ್ತುತ ಕಾನೂನಿನಲ್ಲಿರುವ ಲೋಪಗಳನ್ನು ಬಳಸಿಕೊಂಡು ಭೂ ಕಬಳಿಕೆದಾರರು ಹಾಗೂ ಸಹಕರಿಸಿದ ಅಧಿಕಾರಿಗಳು ತಪ್ಪಿಸಿಕೊಳ್ಳುತ್ತಿದ್ದಾರೆ. ಇವರನ್ನು ಮಟ್ಟ ಹಾಕಲು ಕಠಿಣ ಕಾನೂನು ತರಲಾಗುವುದು ಎಂದು ಕಂದಾಯ ಸಚಿವ ಆರ್. ಅಶೋಕ್ ಹೇಳಿದ್ದಾರೆ. ಬುಧವಾರ ವಿಧಾನಸಭೆಯಲ್ಲಿ ಮಾತನಾಡಿದ ಅವರು ತಪ್ಪಿತಸ್ಥ ಅಧಿಕಾರಿಗಳ ಮೇಲೆ ಕ್ರಮಕ್ಕೆ ಮುಂದಾದರೆ ಕೆಎಟಿಗೆ ಹೋಗಿ ತಡೆಯಾಜ್ಞೆ ತರುತ್ತಿದ್ದಾರೆ. ಭೂ ಕಬಳಿಕೆದಾರರಿಗೂ ಕೋರ್ಟ್‌ನಲ್ಲಿ ಶಿಕ್ಷೆಯಾಗುತ್ತಿಲ್ಲ. ಹೀಗಾಗಿ ತಪ್ಪು ಮಾಡಿದ ಅಧಿಕಾರಿಗಳ ಬಗ್ಗು ಬಡಿಯಲು ಕಠಿಣ ಕಾನೂನು ತರಲಾಗುವುದು ಎಂದು ಹೇಳಿದರು.

## ಭೂ ಪರಿವರ್ತನೆಗೆ ವಾರದಲ್ಲಿ ಸಮ್ಮತಿ ನೀಡಲು ಕ್ರಮ: ಸಚಿವ

ವಿಧಾನ ಪರಿಷತ್: ಭೂ ಪರಿವರ್ತನೆಗೆ ಅರ್ಜಿ ಸಲ್ಲಿಸಿದ ಒಂದು ವಾರದಲ್ಲಿ ಅನುಮೋದನೆ ದೊರಕುವಂತೆ ಹಾಲಿ ಇರುವ ನಿಯಮಗಳನ್ನು ಸರಳೀಕರಿಸಲಾಗುವುದು ಎಂದು ಕಂದಾಯ ಸಚಿವ ಆರ್.ಅಶೋಕ್ ತಿಳಿಸಿದ್ದಾರೆ.

ಜೆಡಿಎಸ್‌ನ ಕೆ.ಎ.ತಿಪ್ಪೇಸ್ವಾಮಿ ಮತ್ತು ಎಚ್.ಎಂ.ರಮೇಶ್ ಗೌಡ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ರಾಜ್ಯದಲ್ಲಿ ಸರ್ವೆ ಸ್ಕೆಚ್, 11-ಇ ನಕ್ಷೆ, ಭೂ ಪರಿವರ್ತನೆ ನಕ್ಷೆ, ಹದ್ದುಬಸ್ತು, ತತ್ಕಾಲ್, ಭೂ ಸ್ವಾಧೀನ, ಪೋಡಿಗಾಗಿ ಸಲ್ಲಿಕೆಯಾಗಿರುವ 4.81 ಲಕ್ಷ ಅರ್ಜಿಗಳು ಬೇರೆ ಬೇರೆ ಕಾರಣಗಳಿಂದ ಬಹಳ ವರ್ಷಗಳಿಂದ ಬಾಕಿ ಉಳಿದಿವೆ. ಕೆಲವೆಡೆ ಅಧಿಕಾರಿಗಳು 200 ಎಕರೆ ಬದಲು 500 ಎಕರೆ ಮಂಜೂರು ಮಾಡಿದ್ದಾರೆ. ನಿವೃತ್ತಿ ಬಳಿಕವೂ ತಹಶೀಲ್ದಾರರು ಭೂ ಮಂಜೂರಾತಿ ನೀಡಿರುವ ಪ್ರಕರಣಗಳಿವೆ. ಭೂಮಿಯೇ ಇಲ್ಲದಿದ್ದರೂ ದಾಖಲೆಗಳಿವೆ. ಬೋಗಸ್ ದಾಖಲೆಗಳನ್ನು ಸೃಷ್ಟಿಸಲಾಗಿದೆ. ಈ ರೀತಿ ಬೋಗಸ್ ದಾಖಲೆ ಸೃಷ್ಟಿಸಿರುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಭೂ ಪರಿವರ್ತನೆಗೆ ಅರ್ಜಿ ಸಲ್ಲಿಸಿದ ಒಂದೇ ವಾರದಲ್ಲಿ ಅನುಮೋದನೆ ನೀಡುವಂತೆ ನಿಯಮಗಳನ್ನು ಸರಳೀಕರಿಸಲಾಗುವುದು. ಹೊಸದಾಗಿ 2000 ಸಾವಿರ ಸರ್ವೆಯರ್‌ಗಳಿಗೆ ತರಬೇತಿ ನೀಡಿದ್ದು, ಶೀಘ್ರ ಕರ್ತವ್ಯಕ್ಕೆ ಹಾಜರಾಗಲಿದ್ದು ಭೂ ಸರ್ವೆ ಕಾರ್ಯಗಳು ಚುರುಕಾಗಲಿವೆ ಎಂದರು.